ಆ) ಈ ಯೋಜನೆಗೆ 2008–09ನೇ ಸಾಲಿನಲ್ಲಿ ಕಾಲುವೆ ಅಭಿವೃದ್ಧಿಗಾಗಿ ರೂ. 5.00 ಲಕ್ಷಗಳು ಮತ್ತು 2010–11ನೇ ಸಾಲಿಗೆ ರೂ. 10.00 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ.

ಚಿಕ್ಕಬಳ್ಳಾಪುರದ ಬಾಗೇಪಲ್ಲಿಯಲ್ಲಿ ಮಿನಿ ವಿಧಾನಸೌಧ ಕಾಮಗಾರಿ ಕುರಿತು

30(30) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ಗುಡಿಬಂಡೆ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ಇದುವರೆವಿಗೂ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ. ಈ ಕಾಮಗಾರಿಯು ಯಾವ ಹಂತದಲ್ಲಿದೆ; ಕಾಮಗಾರಿಯನ್ನು ಎಂದು ಪೂರ್ಣಗೊಳಿಸಲಾಗುವುದು?

ಆ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಯವರ ಸಂಕೀರ್ಣವನ್ನು ಪ್ರಾರಂಭಿಸಲಾಗಿದೆಯೇ; ಹಾಗಿದ್ದಲ್ಲಿ ಸದರಿ ಸಂಕೀರ್ಣಕ್ಕೆ ನೀಡಿರುವ ಅನುದಾನ ಹಾಗೂ ಖರ್ಚು ಮಾಡಿರುವ ಹಣವೆಷ್ಟು?

ಇ) ಕಾಮಗಾರಿಯನ್ನು ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು):

ಅ) ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ತಾಲ್ಲೂಕಿನ ಮಿನಿ ವಿಧಾನಸೌಧ ಕಾಮಗಾರಿಯನ್ನು 2004 ರಲ್ಲಿ ರೂ. 61.76 ಲಕ್ಷಗಳ ವೆಚ್ಚದಲ್ಲಿ ಪೂರ್ಣಗೊಳಿಸಲಾಗಿದೆ. ಗುಡಿಬಂಡೆ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ರೂ.275.00 ಲಕ್ಷಗಳ ಅಂದಾಜು ವೆಚ್ಚಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಸದರಿ ಕಾಮಗಾರಿಯನ್ನು ಕರ್ನಾಟಕ ಗೃಹ ಮಂಡಳಿಗೆ ವಹಿಸಲಾಗಿದೆ. ಇದುವರೆಗೆ ಸದರಿ ಕಾಮಗಾರಿಗೆ ರೂ.100.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಭೌತಿಕವಾಗಿ ಶೇಕಡ 35ರಷ್ಟು ಪ್ರಗತಿ ಸಾಧಿಸಿದ್ದು ಲಿಂಟಲ್ ಹಂತದಲ್ಲಿದೆ. ದಿನಾಂಕ:17–5–2011 ರಂದು ಕಾಮಗಾರಿಯನ್ನು ಪೂರ್ಣಗೊಳಿಸಲು ಗುರಿ ನಿಗದಿಪಡಿಸಲಾಗಿದೆ.

ಆ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜಿಲ್ಲಾ ಸಂಕೀರ್ಣ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ. ಈ ಕಾಮಗಾರಿಯ ಯೋಜನಾ ಅಂದಾಜು ರೂ.2000.00 ಲಕ್ಷಗಳಿಗೆ ಸರ್ಕಾರದ ಅನುಮೋದನೆ ನೀಡಲಾಗಿದ್ದು ಸದರಿ ಕಾಮಗಾರಿಯನ್ನು ಕರ್ನಾಟಕ ಗೃಹ ಮಂಡಳಿಗೆ ವಹಿಸಲಾಗಿದೆ. ಇದುವರೆಗೆ ರೂ. 300.00 ಲಕ್ಷಗಳ ಅನುದಾನವನ್ನು ಸದರಿ

ಕಾಮಗಾರಿಗೆ ಬಿಡುಗಡೆ ಮಾಡಲಾಗಿದೆ. ಶೇಕಡ 15 ರಷ್ಟು ಪ್ರಗತಿ ಸಾಧಿಸಿದ್ದು ರೂ.300.00 ಲಕ್ಷಗಳನ್ನು ಖರ್ಚು ಮಾಡಲಾಗಿದೆ.

ಇ) ಈ ಕಾಮಗಾರಿಯನ್ನು ದಿನಾಂಕ:16/03/2012 ರಂದು ಪೂರ್ಣ ಗೊಳಿಸಲು ಗುರಿ ನಿಗದಿಪಡಿಸಲಾಗಿದೆ.

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಭೂ ಪರಿವರ್ತನೆ ಕುರಿತು

31(31): ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಹಸಿರು ವಲಯದ ಜಮೀನುಗಳನ್ನು ನಿವೇಶನವನ್ನಾಗಿ ಭೂ ಪರಿವರ್ತನೆ ಮಾಡಿಕೊಳ್ಳಲು ಎಷ್ಟು ಮಂದಿಗೆ ಅನುಮತಿಯನ್ನು ನೀಡಲಾಗಿದೆ? (ಸರ್ವೆ ನಂಬರುಗಳ ತಾಲ್ಲೂಕುವಾರು ವಿವರ ಒದಗಿಸುವುದು);

ಆ) ಈ ಭೂ ಪರಿವರ್ತನೆಯಿಂದ ಎಷ್ಟು ಮಂದಿ ನಿವೇಶನ ರಹಿತರಿಗೆ ನಿವೇಶನವನ್ನು ಹಂಚಲ್ಪಟ್ಟಿದೆ? (ತಾಲ್ಲೂಕು ಹಾಗೂ ಜಿಲ್ಲಾವಾರು ವಿವರ ನೀಡುವುದು);

ಶ್ರೀ ಜೆ.ಕರುಣಾಕರ ರೆಡ್ಡಿ (ಕಂದಾಯ ಸಚಿವರು):

ಅ) ಪ್ರಸ್ತುತ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿನ ಚಿಕ್ಕಬಳ್ಳಾಪುರ, ಚಿಂತಾಮಣಿ, ಶಿಡ್ಲಘಟ್ಟ ಹಾಗೂ ಗೌರಿಬಿದನೂರು ಪಟ್ಟಣಗಳಿಗೆ ಮಾತ್ರ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನೆ ಕಾಯ್ದೆಯ ಕಲಂ 4ಎ(1) ರನ್ವಯ ಸರ್ಕಾರದಿಂದ ಸ್ಥಳೀಯ ಯೋಜನಾ ಪ್ರದೇಶ ಘೋಷಿತವಾಗಿದ್ದು, ಈ ಪೈಕಿ ಚಿಕ್ಕಬಳ್ಳಾಪುರ ಮತ್ತು ಚಿಂತಾಮಣಿ ನಗರಗಳಿಗೆ ಮಾತ್ರ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನೆ ಕಾಯ್ದೆಯಡಿಯಲ್ಲಿ ಮಹಾಯೋಜನೆ (ಮಾಸ್ಟರ್ ಪ್ಲಾನ್) ತಯಾರಿಸಿ ಸರ್ಕಾರವು ಅನುಮೋದನೆ ನೀಡಿರುತ್ತದೆ. ಸದರಿ ಮಹಾ ಯೋಜನೆಗಳಲ್ಲಿ ಕಾಯ್ದಿರಿಸಿರುವ ಹಸಿರು ವಲಯಗಳ ಪೈಕಿ ಯಾವೊಂದು ಜಮೀನನ್ನು ಸಹ ವಸತಿ ಉದ್ದೇಶಕ್ಕೆ ಭೂ ಪರಿವರ್ತಿಸಲು ನಗರ ಯೋಜನಾ ಪ್ರಾಧಿಕಾರದವರು ತಾಂತ್ರಿಕ ಅಭಿಪ್ರಾಯ ನೀಡಿರುವುದಿಲ್ಲವಾದ್ದರಿಂದ ಭೂ ಪರಿವರ್ತನೆಗೆ ಅನುಮತಿ ನೀಡಲಾಗಿರುವುದಿಲ್ಲ.

ಆ) ಇಂತಹ ಪ್ರಕರಣಗಳು ಯಾವುದೂ ಇಲ್ಲ.